# ಕರ್ನಾಟಕ ಸರ್ಕಾರ

**ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು:560001**

**ಸಂಖ್ಯೆ: ಸಹನಿಶಾಶಿ.ಆಶಾ/ಕ.ವ.ಕು.ಜಾ.ಸು/32544/ಇ.ವಿ.2020 ದಿನಾಂಕ: 14–3–2020**

**ಸುತ್ತೋಲೆ**

ವಿಷಯ: ಪರೀಕ್ಷೆಗೆ ಹಾಜರಾಗುತ್ತಿರುವ ವಿದ್ಯಾರ್ಥಿಗಳಿಗೆ Novel Corona Virus (COVID-19) ವೈರಸ್‌ನ ಸೊಂಕು ತಡಗಟ್ಟುವಿಕೆಗೆ ಕ್ರಮ ಕೈಗೊಳ್ಳುವ ಬಗ್ಗೆ.

ಉಲ್ಲೇಖ: ಈ ಕಛೇರಿ ಸುತ್ತೋಲೆ ಸಮ ಸಂಖ್ಯೆ ದಿನಾಂಕ: 13–3–2020

******

Novel Corona Virus (COVID-19)ನ ವೈರಸ್ ಸೊಂಕು ತಡಗಟ್ಟುವಿಕೆಗೆ ಮುಂಜಾಗೃತ ಕ್ರಮವಾಗಿ ಉಲ್ಲೇಖಿತ ಸುತ್ತೋಲೆಯಲ್ಲಿ ಈಗಾಗಲೇ 1 ರಿಂದ 6ನೇ ತರಗತಿಯ ಎಲ್ಲಾ ವಿದ್ಯಾರ್ಥಿಗಳಿಗೆ ರಜೆ ಘೋಷಿಸಲಾಗಿದೆ, ಹಾಗೂ 7 ರಿಂದ 10 ನೇ ತರಗತಿಯ ವಿದ್ಯಾರ್ಥಿಗಳಿಗೆ ಪರೀಕ್ಷಾ ಪೂರ್ವಸಿದ್ದತಾ ರಜೆಯನ್ನು ಘೋಷಿಸಿದ್ದು, ಪರೀಕ್ಷೆಯ ದಿನದಂದು ವೇಳಾಪಟ್ಟಿಯಂತೆ ಪರೀಕ್ಷೆಗೆ ಮಾತ್ರ ಹಾಜರಾಗಲು ಉಲ್ಲೇಖಿತ ಸುತ್ತೋಲೆಯಲ್ಲಿ ಸೂಚಿಸಲಾಗಿತ್ತು.

ಮುಂದುವರೆದು, ವಿದ್ಯಾರ್ಥಿಗಳು ಪರೀಕ್ಷೆಗೆ ಹಾಜರಾಗುವುದರಿಂದ ವಿದ್ಯಾರ್ಥಿಗಳಲ್ಲಿ ಸೋಂಕು ಒಬ್ಬರಿಂದ ಮತ್ತೊಬ್ಬರಿಗೆ ಹರಡುವ ಸಂಭವವಿರುವುದರಿಂದ ಮುನ್ನೆಚ್ಚರಿಕಾ ಕ್ರಮವಾಗಿ 7 ರಿಂದ 9ನೇ ತರಗತಿಯವರೆಗಿನ ವಿದ್ಯಾರ್ಥಿಗಳ ಪರೀಕ್ಷೆಯನ್ನು ದಿನಾಂಕ: 31–3–2020ರವರೆಗೆ ಮುಂದೂಡಲಾಗಿದೆ, ಹಾಗೂ ಅಲ್ಲಿಯವರೆಗೆ ಈ ವಿದ್ಯಾರ್ಥಿಗಳಿಗೆ ಪರೀಕ್ಷಾ ಪೂರ್ವಸಿದ್ದತಾ ರಜೆಯನ್ನು (Study holiday) ಘೋಷಿಸಿದೆ. ಸದರಿ ತರಗತಿಗಳ ಪರೀಕ್ಷಾ ವೇಳಾಪಟ್ಟಿಯನ್ನು ಮುಂದಿನ ದಿನಗಳಲ್ಲಿ ತಿಳಿಸಲಾಗುವುದು.

10ನೇ ತರಗತಿಯ ಪರೀಕ್ಷಾ ವೇಳಾಪಟ್ಟಿಯಲ್ಲಿ ಯಾವುದೇ ಬದಲಾವಣೆ ಇರುವುದಿಲ್ಲ, ಪರೀಕ್ಷೆಗಳು ವೇಳಾಪಟ್ಟಿಯಂತೆ ನಡೆಯಲಿದ್ದು, ವಿದ್ಯಾರ್ಥಿಗಳು ಪರೀಕ್ಷಾ ದಿನಗಳಂದು ಮಾತ್ರ ವೇಳಾಪಟ್ಟಿಯಂತೆ ಪರೀಕ್ಷೆಗೆ ಹಾಜರಾಗುವುದು.

(ಮಾನ್ಯ ಆಯುಕ್ತರಿಂದ ಅನುಮೋದಿಸಲ್ಪಟ್ಟಿದೆ)

ನಿರ್ದೇಶಕರು(ಪ್ರೌಢ ಶಿಕ್ಷಣ)
ಸಾರ್ವಜನಿಕ ಶಿಕ್ಷಣ ಇಲಾಖೆ.

ಗೆ,

1. ರಾಜ್ಯದ ಎಲ್ಲಾ ಜಿಲ್ಲಾ ಉಪನಿರ್ದೇಶಕರು (ಆಡಳಿತ), ಸಾರ್ವಜನಿಕ ಶಿಕ್ಷಣ ಇಲಾಖೆ, ಇವರುಗಳಿಗೆ ಅಗತ್ಯ ಕ್ರಮಕ್ಕಾಗಿ.

2. ರಾಜ್ಯದ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳು, ಸಾರ್ವಜನಿಕ ಶಿಕ್ಷಣ ಇಲಾಖೆ, ಇವರುಗಳಿಗೆ ಅಗತ್ಯ ಕ್ರಮಕ್ಕಾಗಿ (ಜಿಲ್ಲಾ ಉಪನಿರ್ದೇಶಕರ ಮುಖಾಂತರ)
3. ರಾಜ್ಯದ ಎಲ್ಲಾ ಸರ್ಕಾರಿ/ಅನುದಾನಿತ/ಅನುದಾನ ರಹಿತ ಶಾಲೆಗಳ ಮುಖ್ಯೋಪಾಧ್ಯಾಯರಿಗೆ ಸೂಕ್ತ ಕ್ರಮಕ್ಕಾಗಿ (ಕ್ಷೇತ್ರ ಶಿಕ್ಷಣಾಧಿಕಾರಿಗಳ ಮುಖಾಂತರ)

**ಪ್ರತಿಯನ್ನು**

1. ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿಗಳಿಗೆ ಕಳುಹಿಸುತ್ತಾ, ಸನ್ಮಾನ್ಯ ಸಚಿವರ ಗಮನಕ್ಕೆ ತರಲು ಕೋರಿದೆ.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆ ರವರ ಮಾಹಿತಿಗಾಗಿ.